ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ7(2)ಪ್ರಾ.ಶಿಅ/ವಗಾವಣೆ ಪತ್ರ-20/2019-20 ದಿನಾಂಕ: 25-05-2019

## ಸುತ್ತೋಲೆ

ವಿಷಯ: ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ, ಪೋಷಕರ ಕೋರಿಕೆ ಇಲ್ಲದೆ ಒತ್ತಾಯ ಪೂರ್ವಕವಾಗಿ ವರ್ಗಾವಣೆ ಪತ್ರ ನೀಡುತ್ತಿರುವ ಬಗ್ಗೆ.

ಉಲ್ಲೇಖ:-1. ಪೋಷಕರ ಮನವಿಗಳು

2. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯ್ದೆ 2009.
3. ಈ ಕಛೇರಿ ಸುತ್ತೋಲೆ ಸಂಖ್ಯೆ:ಎಡಿಎಂ/2/ಆರ್‌ಟಿಇ/ನೆ.ಹೊ.ಶಾಲೆ/2/2012-13, ದಿನಾಂಕ:10.05.2012.
4. ಈ ಕಛೇರಿ ಸುತ್ತೋಲೆ ಸಂಖ್ಯೆ:ಎಡಿಎಂ/2/ಆರ್‌ಟಿಇ/ನೆ.ಹೊ.ಶಾಲೆ/2/2012-13, ದಿನಾಂಕ:23.07.2012.

---

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಕೆಲವೊಂದು ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ ಪೋಷಕರುಗಳಿಗೆ ಸಕಾರಣವನ್ನು ನೀಡದೇ ಒತ್ತಾಯ ಪೂರ್ವಕವಾಗಿ ವರ್ಗಾವಣೆ ಪತ್ರ ನೀಡುವ ಮೂಲಕ ಮಕ್ಕಳನ್ನು ಶಾಲೆಯಿಂದ ಹೊರ ಹಾಕುತ್ತಿರುವುದರಿಂದ ಮಕ್ಕಳಿಗೆ ಮಾನಸಿಕ ಹಿಂಸೆಯಾಗಿ ಶಾಲೆಗೆ ಹೋಗದಂತಹ ಪರಿಸ್ಥಿತಿ ಉದ್ಭವಿಸುತ್ತಿರುವುದು, ಮಕ್ಕಳು ಮನೆಯಲ್ಲಿ ತುಂಬಾ ನೋವು ಅನುಭವಿಸಿ ಮಾನಸಿಕ ಖಿನ್ನತೆಗೆ ಒಳಗಾಗುತ್ತಿದ್ದಾರೆ. ಇಂತಹ ಶಾಲೆಗಳ ವಿರುದ್ಧ ಕಾನೂನಾತ್ಮಕವಾಗಿ ಕ್ರಮಕೈಗೊಳ್ಳುವಂತೆ ಪೋಷಕರುಗಳು ಈ ಕಛೇರಿಗೆ ಮನವಿ ಸಲ್ಲಿಸಿರುತ್ತಾರೆ.

1. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009ರ ಸೆಕ್ಷನ್ 5ರ ಪ್ರಕಾರ ಇತರ ಶಾಲೆಗೆ ತನ್ನ ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸಲು ವರ್ಗಾವಣೆ ಪತ್ರವನ್ನು ಕೋರಲು ಹಕ್ಕುಳ್ಳವನಾಗಿರುತ್ತಾನೆ. ಸೆಕ್ಷನ್5(3)ರ ಪ್ರಕಾರ
   - ಇತರ ಶಾಲೆಗೆ ಸೇರಿಕೊಳ್ಳುವುದಕ್ಕಾಗಿ ಮಗು ಈ ಹಿಂದೆ ಸೇರಿಕೊಂಡಿದ್ದ ಶಾಲೆಯ ಮುಖ್ಯ ಶಿಕ್ಷಕರು ಅಥವಾ ಪ್ರಭಾರದಲ್ಲಿರುವ ಶಿಕ್ಷಕರು ಕೂಡಲೇ ವರ್ಗಾವಣೆ ಪ್ರಮಾಣ ಪತ್ರವನ್ನು ನೀಡತಕ್ಕದ್ದು.
   - ವ್ಯಾಸಂಗ ಮಾಡುತ್ತಿರುವ ಶಾಲೆಯಿಂದ ವರ್ಗಾವಣೆ ಪ್ರಮಾಣ ಪತ್ರವನ್ನು ನೀಡುವುದು ವಿಳಂಬವಾಗಿರುವ ಕಾರಣ ನೀಡಿ, ಇತರ ಶಾಲೆಗೆ ಸೇರಿಕೊಳ್ಳಲು ವಿಳಂಬ ಮಾಡುವುದು ಅಥವಾ ಸೇರಿಸಿಕೊಳ್ಳಲು ನಿರಾಕರಿಸುವುದು ಸರಿಯಾದ ಕಾರಣವಲ್ಲ.
   - ಮುಖ್ಯ ಶಿಕ್ಷಕರು ಅಥವಾ ಶಾಲೆಯ ಪ್ರಭಾರದಲ್ಲಿರುವ ಶಿಕ್ಷಕರು ವರ್ಗಾವಣೆ ಪತ್ರವನ್ನು ನೀಡಲು ವಿಳಂಬ ಮಾಡಿದರೆ, ಮುಖ್ಯ ಶಿಕ್ಷಕ/ಕಿಗೆ ಅನ್ವಯವಾಗುವ ಸೇವಾ ನಿಯಮಗಳ ಮೇರೆಗೆ ಶಿಸ್ತು ಕ್ರಮಕ್ಕೆ ಗುರಿಯಾಗತಕ್ಕದ್ದು.

2. ಈ ರೀತಿ ಪೋಷಕರಿಂದ ಕೋರಿಕೆ / ಮನವಿ ಪತ್ರ ಪಡೆಯದೇ ಒತ್ತಾಯ ಪೂರ್ವಕವಾಗಿ ವರ್ಗಾವಣೆ ಪತ್ರ ನೀಡಿ ಮಕ್ಕಳನ್ನು ಶಾಲೆಯಿಂದ ಹೊರಹಾಕುವುದು ಶಿಕ್ಷಣ ಹಕ್ಕು ಕಾಯ್ದೆಯ ಸೆಕ್ಷನ್ 16 ರ ಉಲ್ಲಂಘನೆಯಾಗುತ್ತದೆ.

3. ಯಾವುದೇ ಶಾಲಾ ಮುಖ್ಯ ಶಿಕ್ಷಕರು / ಆಡಳಿತ ಮಂಡಳಿಗಳು ಮಕ್ಕಳಿಗೆ ವರ್ಗಾವಣೆ ಪತ್ರ ನೀಡುವುದಾಗಿ ಪದೇ ಪದೇ ಪೋಷಕರಿಗೆ ನೋಟೀಸ್ ನೀಡುವುದು / ಮೌಖಿಕವಾಗಿ ತಿಳಿಸುವುದರಿಂದ ಮಕ್ಕಳಿಗೆ ಮಾನಸಿಕ ಹಿಂಸೆ ನೀಡಿದಂತಾಗುತ್ತಿದ್ದು, ಅಂತಹ ಮಕ್ಕಳ ಕಲಿಕೆಯಲ್ಲಿ ವ್ಯತಿರಿಕ್ತ ಪರಿಣಾಮ ಉಂಟಾಗುವುದು ಮತ್ತು ಮಾನಸಿಕ ಖಿನ್ನತೆಗೆ ಒಳಗಾಗುವ ಸಾದ್ಯತೆ ಇರುತ್ತದೆ. ಇದು ಆರ್.ಟಿ.ಇ. ಕಾಯಿದೆಯ ಸೆಕ್ಷನ್ 17ಕ್ಕೆ ವಿರುದ್ಧವಾದ ವರ್ತನೆಯಾಗಿರುತ್ತದೆ.

4. ಉಲ್ಲೇಖ(3)ರಂತೆ ಶಾಲೆಯಲ್ಲಿ ಓದುತ್ತಿರುವ ಯಾವುದೇ ಮಗುವಿಗೆ ಅವರು ಕಲಿಯುತ್ತಿರುವ ಶಾಲೆಯಲ್ಲಿ ಯಾವುದೇ ಕಾರಣಕ್ಕೂ ದೈಹಿಕ ಹಿಂಸೆ ಹಾಗೂ ಮಾನಸಿಕ ಹಿಂಸೆ ನೀಡುವುದನ್ನು ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009ರ ಸೆಕ್ಷನ್17(1)ರಂತೆ ನಿಷೇಧಿಸಲಾಗಿದೆ.

5. ಸೆಕ್ಷನ್ 17(1) ಅನ್ನು ಗಣನೆಗೆ ತೆಗೆದುಕೊಳ್ಳದೇ ಮಕ್ಕಳಿಗೆ ದೈಹಿಕ ಹಾಗೂ ಮಾನಸಿಕ ಹಿಂಸೆ ನೀಡಿದ ಸಂದಂರ್ಭಗಳಲ್ಲಿ ಕಾರಣರಾದ ಶಿಕ್ಷಕ/ಶಿಕ್ಷಕಿಯರನ್ನು ಅಥವಾ ಅಂತಹ ಯಾವುದೇ ಸಿಬ್ಬಂದಿಯನ್ನು ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009ರ ಸೆಕ್ಷನ್ 17(2) ರಂತೆ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದೆಂದು ಸೂಚಿಸಲಾಗಿದೆ.

6. ಶಾಲೆಗಳು ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವುದು, ಮಕ್ಕಳ ಸುರಕ್ಷತೆ ಒದಗಿಸಿ, ಶಾಲಾ ಶೈಕ್ಷಣಿಕ ವಾತಾವರಣವನ್ನು ಉತ್ತಮವಾಗಿರಿಸಿ ಮಕ್ಕಳಿಗೆ ಮಾನಸಿಕವಾಗಿ ಯಾವುದೇ ಸಮಸ್ಯೆಗಳು ಉಂಟಾಗದಂತೆ ನೋಡಿಕೊಳ್ಳುವುದು ಆಡಳಿತ ಮಂಡಳಿಯ ಕರ್ತವ್ಯವಾಗಿರುತ್ತದೆ.

7. ಉಲ್ಲೇಖ (4) ರಂತೆ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009ರಡಿ ಯಾವುದೇ ಮಕ್ಕಳಿಗೆ ತಾರತಮ್ಯ ಮಾಡದಂತೆ ಸೂಚಿಸಲಾಗಿದೆ.

8. ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009ರ ಸೆಕ್ಷನ್ 18(3)ರ ಪ್ರಕಾರ ಮಾನ್ಯತೆಯಲ್ಲಿನ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ಸಂಬಂಧಿಸಿದ ಪ್ರಾಧಿಕಾರವು ಮಾನ್ಯತೆಯನ್ನು ಹಿಂಪಡೆಯುವ ಅಧಿಕಾರ ಹೊಂದಿರುತ್ತದೆ.

ಮೇಲ್ಕಂಡ ಅಂಶಗಳನ್ನು ಉಲ್ಲಂಘಿಸಿದ ಶಾಲೆಗಳ ವಿರುದ್ಧ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ ಸೆಕ್ಷನ್ 35ರ ಪ್ರಕಾರ ಸರ್ಕಾರ / ಇಲಾಖೆಯು ಶಾಲಾ ಆಡಳಿತ ಮಂಡಳಿಗೆ ಸೂಕ್ತವೆಂದು ಭಾವಿಸಬಹುವಂತಹ ಮಾರ್ಗದರ್ಶನಗಳನ್ನು, ಸೂಚನೆಗಳನ್ನು, ನಿರ್ದೇಶನಗಳನ್ನು ನೀಡುವ ಅಧಿಕಾರ ಹೊಂದಿರುತ್ತದೆ.

ಈಗಾಗಲೇ ಹಲವಾರು ಸೂಚನೆ / ಮಾರ್ಗದರ್ಶನಗಳನ್ನು ಇಲಾಖೆಯ ವತಿಯಿಂದ ನೀಡಿದ್ದರೂ ಸಹ ಕೆಲವೊಂದು ಶಾಲೆಗಳಲ್ಲಿ ಇಂತಹ ಪ್ರಕರಣಗಳು ಮರುಕಳಿಸುತ್ತಿರುವ ಬಗ್ಗೆ ದೂರುಗಳು ಬಂದಿರುತ್ತವೆ. ಆದುದರಿಂದ ಇಂತಹ ಪ್ರಕರಣಗಳಲ್ಲಿ ಅಧಿಕಾರಿಗಳು ಅಗತ್ಯ ಕ್ರಮವಹಿಸಲು ತಿಳಿಸಲಾಗಿದೆ. ಒಂದು ವೇಳೆ ಇಂತಹ ಪ್ರಕರಣಗಳು ಮರುಕಳಿಸಿದ್ದಲ್ಲಿ ನಿಯಮಾನುಸಾರ ಅಂತಹ ಶಾಲೆಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ, ಮುಂದಿನ ಆಗುಹೋಗುಗಳಿಗೆ ಆಯಾ ವ್ಯಾಪ್ತಿಯ ಉಪನಿರ್ದೇಶಕರು (ಆಡಳಿತ) / ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಿ ಸೂಕ್ತ ಕ್ರಮ ಜರುಗಿಸಲಾಗುವುದು.

[ಡಾ॥ ಎಂ.ಟಿ. ರೇಜು, ಭಾ.ಆ.ಸೇ]
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ / ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಮುಖ್ಯ ಶಿಕ್ಷಕರುಗಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560 001 ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಕಲಬುರಗಿ / ಧಾರವಾಡ, ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ನಿರ್ದೇಶಕರು, ಕಲಬುರಗಿ / ಧಾರವಾಡ, ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಕಛೇರಿ ಪ್ರತಿ.